# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| ಭಾಗ– III<br>Part - III | ಬೆಂಗಳೂರು, ಮಂಗಳವಾರ , ೧೪ ಜನವರಿ, ೨೦೨೦ ( ಪುಷ್ಯ ೨೪, ಶಕವರ್ಷ ೧೯೪೧)<br>Bengaluru, Tuesday, 14, JANUARY, 2020 ( Pushya 24, ShakaVarsha 1941) | ನಂ.೧೦<br>No.10 |
|---|---|---|


## ರಾಜ್ಯ ಚುನಾವಣಾ ಆಯೋಗ, ಕರ್ನಾಟಕ


ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಂಡಳಿ ಕಟ್ಟಡ (ಹಿಂಭಾಗ) 1ನೇ ಮಹಡಿ ನಂ.8, ಕನ್ನಿಂಗ್‌ಹ್ಯಾಂ ರಸ್ತೆ. ಬೆಂಗಳೂರು–560052.


**ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ ರಾಚುಆ 06 ಇಯುಬಿ 2020**

**ಬೆಂಗಳೂರು, ದಿನಾಂಕ: 14.01.2020.**

ರಾಜ್ಯ ಚುನಾವಣಾ ಆಯೋಗವು ಸಂವಿಧಾನದ ಪರಿಚ್ಛೇದ 243ಜೆಡ್‌ಎ ಹಾಗೂ ಕರ್ನಾಟಕ ಪೌರಸಭೆಗಳ (ಕೌನ್ಸಿಲರುಗಳ ಚುನಾವಣೆ) ನಿಯಮಗಳು 1977ರ ನಿಯಮ 3(1) ರಂತೆ ಪ್ರದತ್ತವಾಗಿರುವ ಅಧಿಕಾರದ ಮೇರೆಗೆ ಬೆಳಗಾವಿ ಜಿಲ್ಲೆಯ ಖಾನಾಪುರ ಪಟ್ಟಣ ಪಂಚಾಯತಿ ವಾರ್ಡ್ ನಂ. 05 ಮತ್ತು ಹಾವೇರಿ ಜಿಲ್ಲೆಯ ಹಿರೇಕೆರೂರ ಪಟ್ಟಣ ಪಂಚಾಯಿತಿ ವಾರ್ಡ್ ನಂ.12ರ ಸದಸ್ಯರುಗಳ ಮರಣದಿಂದ ತೆರವಾಗಿರುವ ಸದಸ್ಯ ಸ್ಥಾನಗಳಿಗೆ ಈ ಕೆಳಕಂಡ ಚುನಾವಣಾ ವೇಳಾಪಟ್ಟಿಯಂತೆ ಉಪಚುನಾವಣೆಯನ್ನು ನಡೆಸಲು ಆದೇಶಿಸಿದೆ.

ಚುನಾವಣಾ ವೇಳಾ ಪಟ್ಟಿ

| | | |
|---|---|---|
| 1. | ಜಿಲ್ಲಾಧಿಕಾರಿಗಳು ಚುನಾವಣಾ ಅಧಿಸೂಚನೆಯನ್ನು ಹೊರಡಿಸುವ ದಿನಾಂಕ ಮತ್ತು ದಿನ | 21.01.2020<br>ಮಂಗಳವಾರ |
| 2 | ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ದಿನ | 28.01.2020<br>ಮಂಗಳವಾರ |
| 3 | ನಾಮಪತ್ರಗಳನ್ನು ಪರಿಶೀಲಿಸುವ ದಿನಾಂಕ ಮತ್ತು ದಿನ | 29.01.2020<br>ಬುಧವಾರ |
| 4 | ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನಾಂಕ ಮತ್ತು ದಿನ | 31.01.2020<br>ಶುಕ್ರವಾರ |
| 5 | ಮತದಾನ ಅವಶ್ಯವಿದ್ದರೆ, ಮತದಾನವನ್ನು ನಡೆಸ ಬೇಕಾದ ದಿನಾಂಕ ಮತ್ತು ದಿನ ಸಮಯ ಬೆಳಿಗ್ಗೆ 7.00 ಗಂಟೆಯಿಂದ ಸಾಯಂಕಾಲ 5.00 ಗಂಟೆವರೆಗೆ | 09.02.2020<br>ಭಾನುವಾರ |
| 6 | ಮರು ಮತದಾನ ಇದ್ದಲ್ಲಿ ಮತದಾನದ ಸಮಯ ಬೆಳಿಗ್ಗೆ 7.00 ಗಂಟೆಯಿಂದ ಸಾಯಂಕಾಲ 5.00 ಗಂಟೆವರೆಗೆ | 10.02.2020<br>ಸೋಮವಾರ |

| | | |
|---|---|---|
| 7 | ಮತಗಳ ಎಣಿಕೆಯ ದಿನಾಂಕ ಮತ್ತು ದಿನ ಬೆಳಿಗ್ಗೆ 8.00 ಗಂಟೆಯಿಂದ ತಾಲ್ಲೂಕಿನ ಕೇಂದ್ರ ಸ್ಥಳದಲ್ಲಿ | 11.02.2020 ಮಂಗಳವಾರ |
| 8 | ಚುನಾವಣೆಯನ್ನು ಯಾವ ದಿನಾಂಕಕ್ಕೆ ಮುಂಚೆ ಮುಕ್ತಾಯಗೊಳಿಸಬೇಕೋ ಆ ದಿನಾಂಕ ಮತ್ತು ದಿನ | 11.02.2020 ಮಂಗಳವಾರ |

ಸದಾಚಾರ ಸಂಹಿತೆಯು ಈ ತಕ್ಷಣದಿಂದ ಜಾರಿಗೆ ಬರುತ್ತದೆ. ಅಂದರೆ, ದಿನಾಂಕ: **14.01.2020** ರಿಂದ ದಿನಾಂಕ: **11.02.2020** ವರೆಗೆ ಉಪಚುನಾವಣೆ ನಡೆಯುವ ವಾರ್ಡ್‌ಗಳ ವ್ಯಾಪ್ತಿಯಲ್ಲಿ ಜಾರಿಯಲ್ಲಿರುತ್ತದೆ.

ಜಿಲ್ಲಾಧಿಕಾರಿಗಳು ಆಯೋಗವು ಆದೇಶಿಸಿದ ಚುನಾವಣಾ ವೇಳಾಪಟ್ಟಿಯನ್ನು ಅನುಸರಿಸಿ ಪೌರಸಭೆಗಳ (ಕೌನ್ಸಿಲರುಗಳ ಚುನಾವಣೆ) ನಿಯಮಗಳು, 1977ರ ನಿಯಮ 8ರ ಪ್ರಕಾರ ಉಪ ಚುನಾವಣೆ ನಡೆಯುವ ಖಾನಾಪುರ ಪಟ್ಟಣ ಪಂಚಾಯತಿ ವಾರ್ಡ್ ನಂ. 05 ಮತ್ತು ಹಾವೇರಿ ಜಿಲ್ಲೆಯ ಹಿರೇಕೆರೂರ ಪಟ್ಟಣ ಪಂಚಾಯಿತಿ ವಾರ್ಡ್ ನಂ.12 ಗಳಿಗೆ ಸಂಬಂಧಿಸಿದಂತೆ ಚುನಾವಣಾ ಅಧಿಸೂಚನೆಯನ್ನು ಪ್ರಪತ್ರ–1 ರಲ್ಲಿ ಹೊರಡಿಸತಕ್ಕದ್ದು. ಚುನಾವಣಾ ಅಧಿಸೂಚನೆಯಲ್ಲಿ ಉಪ ಚುನಾವಣೆ ನಡೆಯುವ ವಾರ್ಡ್‌ನ ಸಂಖ್ಯೆ ಮೀಸಲಾತಿ ವಿವರಗಳನ್ನು ಸ್ಪಷ್ಟವಾಗಿ ನಮೂದಿಸುವುದು. ಹೊರಡಿಸಲಾದ ಅಧಿಸೂಚನೆಯನ್ನು ಅದೇ ದಿನದಂದು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸತಕ್ಕದ್ದು. ಅಧಿಸೂಚನೆಯ ಪ್ರತಿಯನ್ನು ಜಿಲ್ಲಾಧಿಕಾರಿ ಕಛೇರಿ, ಸಂಬಂಧಪಟ್ಟ ಪಟ್ಟಣ ಪಂಚಾಯತಿಯ ಕಛೇರಿ ಹಾಗೂ ಇನ್ನಿತರ ಮುಖ್ಯ ಸ್ಥಳಗಳಲ್ಲಿಯೂ ಸಹಾ ಪ್ರದರ್ಶಿಸತಕ್ಕದ್ದು ಹಾಗೂ ಆಯೋಗಕ್ಕೆ ಅಂದೇ ಇ–ಮೇಲ್ ಮೂಲಕ ಕಳುಹಿಸುವುದು.

ಅಧಿಸೂಚನೆಯ ಪ್ರತಿಯನ್ನು ಸಂಬಂಧಿಸಿದ ಚುನಾವಣಾಧಿಕಾರಿಗಳಿಗೆ ಕಳುಹಿಸಿಕೊಟ್ಟು ಅದೇ ದಿನದಂದು ಪ್ರಪತ್ರ–1ಎ ರಲ್ಲಿ ಚುನಾವಣಾ ನೋಟೀಸನ್ನು ಪ್ರಕಟಿಸುವಂತೆ ಹಾಗೂ ಚುನಾವಣೆ ಪ್ರಕ್ರಿಯೆಯನ್ನು ಪ್ರಾರಂಭಿಸುವಂತೆ ಸೂಚಿಸುವುದು. ಚುನಾವಣಾ ವೇಳಾಪಟ್ಟಿಯನ್ನು ಸಾರ್ವಜನಿಕರ ಮಾಹಿತಿಗಾಗಿ ದಿನಪತ್ರಿಕೆಗಳಲ್ಲಿ ಹಾಗೂ ಸ್ಥಳೀಯ ಪತ್ರಿಕೆಗಳಲ್ಲಿ (ವೆಚ್ಚ ಬಾರದಂತೆ) ಪ್ರಕಟಿಸಲು ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವುದು.

**<u>ವಿಶೇಷ ಸೂಚನೆ :–</u>**

1. ಈಗಾಗಲೇ ನೀಡಿರುವ ನಿರ್ದೇಶನಗಳಂತೆ, ಉಪಚುನಾವಣೆ ನಡೆಯಲಿರುವ ಖಾನಾಪುರ ಮತ್ತು ಹಿರೇಕೆರೂರ ಪಟ್ಟಣ ಪಂಚಾಯಿತಿಗಳಿಗೆ ಸಂಬಂಧಿಸಿದಂತೆ ಹಾಲಿ ಚಾಲ್ತಿಯಲ್ಲಿರುವ ವಿಧಾನಸಭಾ ಮತದಾರರ ಪಟ್ಟಿಯನ್ನು ಅಳವಡಿಸಿಕೊಂಡು ತಯಾರಿಸಲಾಗುವ ಮತದಾರರ ಪಟ್ಟಿಯಂತೆ ಚುನಾವಣೆ ನಡೆಸುವುದು.
2. ಉಪಚುನಾವಣೆ ನಡೆಸಲಾಗುವ ಖಾನಾಪುರ ಪಟ್ಟಣ ಪಂಚಾಯತಿ ವಾರ್ಡ್ ನಂ. 05ಕ್ಕೆ ಮತ್ತು ಹಿರೇಕೆರೂರ ಪಟ್ಟಣ ಪಂಚಾಯತಿ ವಾರ್ಡ್ ನಂ. 12ಕ್ಕೆ ಚುನಾವಣಾಧಿಕಾರಿ ಹಾಗೂ ಸಹಾಯಕ ಚುನಾವಣಾಧಿಕಾರಿಗಳಿಗೆ ಸೂಕ್ತ ತರಬೇತಿಯನ್ನು ನೀಡುವುದು ಹಾಗೂ ಚುನಾವಣೆಗೆ ಸಂಬಂಧಪಟ್ಟ ಎಲ್ಲಾ ಅಗತ್ಯ ಮಾಹಿತಿ, ಸುತ್ತೋಲೆ ಹಾಗೂ ನಿರ್ದೇಶನ ಪತ್ರಗಳ ಪ್ರತಿಯನ್ನು ನೀಡುವುದು.
3. ಘೋಷಣಾ ಪತ್ರ / ಪ್ರಮಾಣ ಪತ್ರ: ಮತದಾರನಿಗೆ ಅಭ್ಯರ್ಥಿಯ ಪೂರ್ವಾಪರಗಳನ್ನು ತಿಳಿದುಕೊಳ್ಳಲು ಸ್ಪರ್ಧಿಸುವ ಪ್ರತಿಯೊಬ್ಬ ಅಭ್ಯರ್ಥಿಯು ನಾಮಪತ್ರದೊಂದಿಗೆ, ತನ್ನ ಹಿನ್ನಲೆ, ಚಿರಾಸ್ತಿ ಮತ್ತು ಸ್ಥಿರಾಸ್ತಿಗಳ ವಿವರಗಳು, ತನ್ನ ಸ್ವ–ವಿವರ, ವಿದ್ಯಾರ್ಹತೆ ಆದಾಯದ ಮೂಲಗಳನ್ನು ಪರಿಷ್ಕೃತ ನಮೂನೆಯಲ್ಲಿ ಘೋಷಣಾ ಪತ್ರ / ಪ್ರಮಾಣ ಪತ್ರ (Affidavit) ಸಲ್ಲಿಸಬೇಕಾಗಿರುತ್ತದೆ.
4. **ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 14 ಹೆಚ್‌ಹೆಚ್‌ಎಲ್ 2019, ದಿನಾಂಕ: 22.11.2019 ರಂತೆ ದಿನಾಂಕ: 25.01.2020ರ ನಾಲ್ಕನೇ ಶನಿವಾರವೂ ನೆಗೋಷಿಯೆಬಲ್ ಇನ್ಸ್ಟ್ರುಮೆಂಟ್ಸ್ ಆಕ್ಟ್ 1881ರ ಪ್ರಕಾರ ಸಾರ್ವತ್ರಿಕ ರಜಾ ದಿನ ಅಲ್ಲದ ಕಾರಣ ಅಂದು ಚುನಾವಣಾಧಿಕಾರಿಗಳು ತಮ್ಮ ಕಛೇರಿಯಲ್ಲಿ ಹಾಜರಿದ್ದು ನಾಮಪತ್ರಗಳನ್ನು ಸ್ವೀಕರಿಸಬೇಕಾಗಿರುತ್ತದೆ.**
5. ನೀತಿ ಸಂಹಿತೆ ಉಲ್ಲಂಘನೆ ಪ್ರಕರಣಗಳು ಗಮನಕ್ಕೆ ಬಂದಾಗ ಆಯೋಗದ ಆದೇಶ ಸಂಖ್ಯೆ: ಎಸ್‌ಇಸಿ 10 ಎಂಐಎಸ್‌ಸಿ 2016, ದಿನಾಂಕ: 29.06.2016 ಹಾಗೂ ತಿದ್ದುಪಡಿ ದಿನಾಂಕ: 06.07.2016 ರಂತೆ ಕ್ರಮವಹಿಸುವುದು.
6. ಕಾಲಕಾಲಕ್ಕೆ ಚುನಾವಣೆಗೆ ಸಂಬಂಧಿಸಿದ ವರದಿಯನ್ನು ಆಯೋಗಕ್ಕೆ ಸಲ್ಲಿಸುವುದು.
7. ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ: ರಾಚುಆ 14 ಇಯುಬಿ 2017, ದಿನಾಂಕ: 10.03.2017 ರಂತೆ ಮತಪತ್ರದಲ್ಲಿ "NOTA" ಅವಕಾಶ ಕಲ್ಪಿಸಲು ಆದೇಶಿಸಿದೆ.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment **WPP No. 297**



8. ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ: ರಾಚುಆ 28 ಇಯುಬಿ 2018, ದಿನಾಂಕ: 01.06.2018 ರಂತೆ ಮತಪತ್ರದಲ್ಲಿ ಎಲ್ಲಾ ಅಭ್ಯರ್ಥಿಗಳ ಹೆಸರಿನ ಮುಂದೆ ಅವರ ಇತ್ತೀಚಿನ ಭಾವಚಿತ್ರ ಮುದ್ರಿಸುವಂತೆ ಕ್ರಮ ಕೈಗೊಳ್ಳುವುದು.

ಚುನಾವಣಾ ಪ್ರಕ್ರಿಯೆ ಜಾರಿಯಲ್ಲಿರುವ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳು ಸದಾಚಾರ ಸಂಹಿತೆಯು ಯಾವುದೇ ರೀತಿಯಲ್ಲೂ ಉಲ್ಲಂಘನೆಯಾಗದಂತೆ ನೋಡಿಕೊಳ್ಳತಕ್ಕದ್ದು.

ಆದೇಶಾನುಸಾರ

(ಎನ್.ಆರ್. ನಾಗರಾಜು)
ಅಧೀನ ಕಾರ್ಯದರ್ಶಿ,
ರಾಜ್ಯ ಚುನಾವಣಾ ಆಯೋಗ, ಕರ್ನಾಟಕ.

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು.

SUNIL GARDE Digitally signed by SUNIL GARDE
Date: 2020.01.14 08:00:02 +05'30'